**<u>ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ. ರವರ ನ್ಯಾಯಾಲಯ, ನಂಜನಗೂಡು</u>**

**<u>ಸಿಸಿ ಸಂಖ್ಯೆ: 913/2023</u>**

**ಫಿರ್ಯಾದುದಾರರು** : ಸರ್ಕಾರದ ಪರವಾಗಿ ಆರಕ್ಷಕ ಉಪ-ನಿರೀಕ್ಷಕರು,
ನಂಜನಗೂಡು ಗ್ರಾಮಾಂತರ ಪೊಲೀಸ್ ಠಾಣೆ,
ನಂಜನಗೂಡು.

ವಿರುದ್ಧ

**ಆರೋಪಿಗಳು** : ಶ್ರೀ.ರಹಮತ್ ಉಲ್ಲಾ ಮತ್ತು ಇತರರು

:: **<u>ದೋಷಾರೋಪಣೆ</u>** ::

**ಶ್ರೀ ಸತೀಶ ಕೆ.ಜಿ., ಬಿ.ಎ., ಎಲ್.ಎಲ್.ಬಿ.,** ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ. ನಂಜನಗೂಡು ಆದ ನಾನು ಆರೋಪಿಗಳಾದ-

1) ಶ್ರೀ.ರೆಹಮತ್ ಉಲ್ಲಾ ಬಿನ್ ಶೌಖತ್ ಆಲಿ
ವಯಸ್ಸು ಸುಮಾರು 45 ವರ್ಷ,

2) ಶ್ರೀ.ಮನ್ಸೂರ್ ಆಲಿ ಬಿನ್ ಮುಬಾರಕ್
ವಯಸ್ಸು ಸುಮಾರು 30 ವರ್ಷ,

3) ಶ್ರೀ.ಆಸಿಫ್ ಬಿನ್ ಮೊಹಮದ್ ಮುಬಾರಕ್
ವಯಸ್ಸು ಸುಮಾರು 29 ವರ್ಷ,

4) ಶ್ರೀ.ನೂರುದ್ದೀನ್ ಬಿನ್ ಸೌಕತ್ ಆಲಿ
ವಯಸ್ಸು ಸುಮಾರು 47 ವರ್ಷ,

5) ಶ್ರೀ.ಮುಜಾಹಿದ್ ಪಾಷ ಬಿನ್ ಅಹಮದ್ ಸಾಬ್
ವಯಸ್ಸು ಸುಮಾರು 35 ವರ್ಷ,

6) ಶ್ರೀ.ಜುನಾಯಿದ್ ಪಾಷ ಬಿನ್ ಅಹಮದ್ ಸಾಬ್
ವಯಸ್ಸು ಸುಮಾರು 30 ವರ್ಷ,

7) ಶ್ರೀ.ಅಹಮದ್ ಸಾಬ್ ಬಿನ್ ಲೇಟ್ ಫೀರ್ ಸಾಬ್
ವಯಸ್ಸು ಸುಮಾರು 61 ವರ್ಷ,

8) ಶ್ರೀ.ಮೊಹೀನ್ ತಾಜ್ ಕೋಂ ಅಹಮದ್ ಸಾಬ್
ವಯಸ್ಸು ಸುಮಾರು 51 ವರ್ಷ,

ನಂಜನಗೂಡು ತಾಲ್ಲೂಕಿನ ಹಲ್ಲರೆ ಗ್ರಾಮದ ನಿವಾಸಿಗಳಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆಃ-

ಮೊದಲನೆಯದಾಗಿ ದಿನಾಂಕ 04.10.2022 ರಂದು ರಾತ್ರಿ 08.00 ಗಂಟೆ ಸಮಯದಲ್ಲಿ, ನಂಜನಗೂಡು ಗ್ರಾಮಾಂತರ ಪೊಲೀಸ್ ಠಾಣಾ ವ್ಯಾಪ್ತಿಗೆ ಸೇರಿದ ಹಲ್ಲರೆ ಗ್ರಾಮದಲ್ಲಿರುವ 7 ನೇ ಆರೋಪಿಯಾದ ನಿಮ್ಮ ವಾಸದ ಮನೆಯ ಮುಂದಿನ ರಸ್ತೆಯಲ್ಲಿ ಚಾಸಾ-2-ಶ್ರೀ.ಮುಬಾರಕ್ ಆಲಿಯವರು 7 ನೇ ಆರೋಪಿಯಾದ ನಿಮ್ಮನ್ನು ಉದ್ದೇಶಿಸಿ "ನಮಗೆ ಜಮೀನು ರಿಜಿಸ್ಟರ್ ಮಾಡಿ ನಿನ್ನ ಮಗನಿಗೆ ದಾನ ಮಾಡಿರುವುದು ಸರಿಯೇ ಎಂದು ಕೇಳಲು ಹೋಗಿದ್ದಾಗ" ಆರೋಪಿಗಳಾದ ನೀವು ಏಕೋದ್ದೇಶದಿಂದ ಚಾಸಾ-1 ರಿಂದ 4 ರವರ ಜೊತೆ ಜಗಳ ಮಾಡಲು ಅಕ್ರಮ ಕೂಟ ಸೇರಿಕೊಂಡಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 143 ಸಹವಾಚಕ 149 ರಂತೆ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುವಿರಿ.

ಎರಡನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿಗಳಾದ ನೀವು ಏಕೋದ್ದೇಶದಿಂದ ಚಾಸಾ-1 ರಿಂದ 4 ರವರ ಜೊತೆ ಜಗಳ ಮಾಡಲು ಅಕ್ರಮ ಗುಂಪನ್ನು ಕಟ್ಟಿಕೊಂಡು ದೊಂಬಿಯನ್ನುಂಟು ಮಾಡಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 147 ಸಹವಾಚಕ 149 ರಂತೆ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುವಿರಿ.

ಮೂರನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿಗಳಾದ ನೀವು ಏಕೋದ್ದೇಶದಿಂದ ಅಕ್ರಮಕೂಟ ಸೇರಿ ಚಾಸಾ-1 ರಿಂದ 4 ರವರ ಜೊತೆ ಜಗಳ ತೆಗೆದು, ಆರೋಪಿಗಳ ಪೈಕಿ 7 ನೇ ಆರೋಪಿಯಾದ ನೀವು ಚಾಸಾ-1-ಫಯಾಜ್ ಅಹಮದ್‌ರವರನ್ನು ಉದ್ದೇಶಿಸಿ "ಬೋಳಿಮಗನೆ ನಾನು ನನ್ನ ಜಮೀನನ್ನು ನಿನಗೆ ಕೊಡುವುದಿಲ್ಲ. ನಾನು ಯಾರಿಗಾದರೂ ಬರೆದುಕೊಡುತ್ತೇನೆ" ಎಂದು ಅವಾಚ್ಯ ಶಬ್ಧಗಳಿಂದ

ಬೈದಿದ್ದು, ಆ ಮೂಲಕ ಚಾಸಾ-1 ರವರಿಗೆ ಉದ್ರೇಕವನ್ನುಂಟು ಮಾಡಿದರೆ ಅಂತಹ ಉದ್ರೇಕದಿಂದ ಅವರು ಕುಪಿತರಾಗಿ ಶಾಂತಿಭಂಗವನ್ನುಂಟು ಮಾಡಲೆಂಬ ಅಥವಾ ಯಾವುದೇ ಅಪರಾಧವನ್ನು ಮಾಡಬೇಕೆಂಬ ಉದ್ದೇಶದಿಂದ ಅವರನ್ನು ಅವಮಾನಪಡಿಸಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 504 ಸಹವಾಚಕ 149 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುವಿರಿ.

ನಾಲ್ಕನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿಗಳಾದ ನೀವು ಏಕೋದ್ದೇಶದಿಂದ ಅಕ್ರಮಕೂಟ ಸೇರಿ ಚಾಸಾ-1 ರಿಂದ 4 ರವರ ಜೊತೆ ಜಗಳ ತೆಗೆದು, ಆರೋಪಿಗಳ ಪೈಕಿ 1 ನೇ ಆರೋಪಿಯಾದ ನೀವು ಚಾಸಾ-2 ರವರನ್ನು ತಬ್ಬಿ ಹಿಡಿದುಕೊಂಡು ಒಂದು ಎಲ್ಲೆಯಿಂದಾಚೆಗೆ ಮುಂದೆ ಹೋಗದಂತೆ ಅಕ್ರಮವಾಗಿ ಪ್ರತಿಬಂಧಿಸಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 341 ಸಹವಾಚಕ 149 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುವಿರಿ.

ಐದನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿಗಳಾದ ನೀವು ಏಕೋದ್ದೇಶದಿಂದ ಅಕ್ರಮಕೂಟ ಸೇರಿ ಚಾಸಾ-1 ರಿಂದ 4 ರವರ ಜೊತೆ ಜಗಳ ತೆಗೆದು, ಆರೋಪಿಗಳ ಪೈಕಿ 2 ನೇ ಆರೋಪಿಯಾದ ನೀವು ಮಾರಕಾಯುಧವಾದ ದೊಣ್ಣೆಯಿಂದ ಚಾಸಾ-2 ರವರ ಎಡಭಾಗದ ಕಪಾಲಕ್ಕೆ ಹೊಡೆದಿದ್ದು, 5 ನೇ ಆರೋಪಿಯಾದ ನೀವು ದೊಣ್ಣೆಯಿಂದ ಚಾಸಾ-1 ರವರ ಎಡತೋಳಿಗೆ ಹೊಡೆದಿದ್ದು, 3 ನೇ ಆರೋಪಿಯಾದ ನೀವು ದೊಣ್ಣೆಯಿಂದ ಚಾಸಾ-2 ರವರ ಎದೆಯ ಮೇಲ್ಭಾಗಕ್ಕೆ ಸ್ವ-ಇಚ್ಛೆಯಿಂದ ಹಲ್ಲೆ ಮಾಡಿ ಸಾಮಾನ್ಯ ಸ್ವರೂಪದ ಗಾಯವನ್ನುಂಟು ಮಾಡಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 324 ಸಹವಾಚಕ 149 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುವಿರಿ.

ಆರನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿಗಳಾದ ನೀವು ಏಕೋದ್ದೇಶದಿಂದ ಅಕ್ರಮಕೂಟ ಸೇರಿ ಚಾಸಾ-1 ರಿಂದ 4 ರವರ ಜೊತೆ ಜಗಳ ತೆಗೆದು, ಆರೋಪಿಗಳ ಪೈಕಿ 4 ನೇ ಆರೋಪಿಯಾದ ನೀವು ಹಲ್ಲಿನಿಂದ

ಚಾಸಾ-3 ರವರ ಬಲಗೈ ಉಂಗುರದ ಬೆರಳಿಗೆ ಕಚ್ಚಿ ಗಾಯಗೊಳಿಸಿದ್ದ, 6 ಮತ್ತು 8 ನೇ ಆರೋಪಿಗಳಾದ ನೀವು ನಿಮ್ಮ ಕೈಗಳಿಂದ ಚಾಸಾ-1 ಮತ್ತು 4 ರವರ ಮೈ-ಕೈಗೆ ಹೊಡೆದು ನೋವುಂಟು ಮಾಡಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 323 ಸಹವಾಚಕ 149 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುವಿರಿ.

ಕೊನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿಗಳಾದ ನೀವು ಏಕೋದ್ದೇಶದಿಂದ ಅಕ್ರಮಕೂಟ ಸೇರಿ ಚಾಸಾ-1 ರಿಂದ 4 ರವರ ಜೊತೆ ಜಗಳ ತೆಗೆದು, ಆರೋಪಿಗಳ ಪೈಕಿ 1 ಮತ್ತು 2 ನೇ ಆರೋಪಿಗಳಾದ ನೀವು ಚಾಸಾ-4 ರವರ ಸೀರೆ ಹಿಡಿದು ಎಳೆದಾಡಿ ಹರಿದು ಹಾಕಿ ಆಕೆಗೆ ಮಾನಭಂಗ ಮಾಡುವ ಉದ್ದೇಶದಿಂದ ಚಾಸಾ-1 ರವರ ಮೇಲೆ ಅಪರಾಧಿಕ ಬಲ ಪ್ರಯೋಗ ಮಾಡಿದ್ದು, ಆ ಮೂಲಕ ನೀವು ಭಾರತೀಯ ದಂಡ ಸಂಹಿತೆ ಕಲಂ 354 ಸಹವಾಚಕ 149 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುವಿರಿ.

ಪ್ರಶ್ನೆಃ1- ಈ ಮೇಲೆ ಹೇಳಿದಂತೆ ನಿಮಗೆ ಓದಿ ಹೇಳಿ ವಿವರಿಸಿದ ದೋಷಾರೋಪಣೆಯನ್ನು ಅರ್ಥಮಾಡಿಕೊಂಡಿರುವಿರಾ?

1 ರಿಂದ 8 ನೇ ಆರೋಪಿಗಳ ಉತ್ತರಃ

ಪ್ರಶ್ನೆಃ2- ಸದರಿ ಆರೋಪಣೆಗಳನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆಯಾಗಬೇಕೋ?

1 ರಿಂದ 8 ನೇ ಆರೋಪಿಗಳ ಉತ್ತರಃ

(ಆರೋಪಿಗಳಿಗೆ ತಿಳಿದಿರುವ ಕನ್ನಡ ಭಾಷೆಯಲ್ಲಿ ಈ ದೋಷಾರೋಪಣೆಯನ್ನು ಓದಿ ತಿಳಿಸಿ ಹೇಳಲಾಗಿ ಸದರಿ ಆರೋಪಿಗಳು ಹೇಳಿದ ಉತ್ತರಗಳನ್ನು ಯಥಾವತ್ತಾಗಿ ಬರೆದುಕೊಳ್ಳಲಾಯಿತ್ತೆಂದು ದೃಢೀಕರಿಸಿರುತ್ತೇನೆ.)

ದಿನಾಂಕಃ 19.11.2025.

(ಸತೀಶ. ಕೆ.ಜಿ.)
ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾದಂ. ನಂಜನಗೂಡು.